(23)

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ : ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ ಮೂರನೇ ತ್ರೈಮಾಸಿಕ ಯೋಜನೆ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.**

ಓದಲಾಗಿದೆ.

1. ಸರ್ಕಾರಿ ಆದೇಶಗಳ ಸಂಖ್ಯೆ: ಕೃಇ 24 ಕೃವಿಬೆ 2013, ದಿನಾಂಕ: 21-06-2013 ಮತ್ತು 20-08-2013.
2. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ರವರ ಪತ್ರ ಸಂಖ್ಯೆ: ಹನಿಅ/ವಿಭಾಗ 3/ಸಿ5-2/2013-14. ದಿನಾಂಕ: 01-10-2013.

**ಪ್ರಸ್ತಾವನೆ:**

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯಕ್ಕೆ ಕರ್ನಾಟಕ ಸರ್ಕಾರವು 2013-14ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಸಂಶೋಧನೆ ಹಾಗೂ ಕೃಷಿ ಶಿಕ್ಷಣಕ್ಕೆ ಒಟ್ಟು ರೂ. 2900.00 ಲಕ್ಷಗಳನ್ನು ನಿಗಧಿಪಡಿಸಿರುತ್ತದೆ. 2013-14ನೇ ಸಾಲಿನ ಆಯವ್ಯಯದಲ್ಲಿ ನಿಗದಿಯಾದಂತೆ ಮೇಲೆ(1) ರಲ್ಲಿ ಓದಲಾದ ದಿನಾಂಕ: 21-06-2013 ಮತ್ತು 20-08-2013 ರ ಆದೇಶಗಳಲ್ಲಿ ರೂ. 725.00 +ರೂ.725.00 ಲಕ್ಷಗಳು = ಒಟ್ಟು ರೂ. 1450.00 ಲಕ್ಷಗಳನ್ನು (ಒಂದು ಸಾವಿರದ ನಾಲ್ಕು ನೂರಾ ಐವತ್ತು ಲಕ್ಷಗಳು ರೂಪಾಯಿಗಳು ಮಾತ್ರ) ಶಿಕ್ಷಣ ಮತ್ತು ಸಂಶೋಧನೆಗಾಗಿ ಮೊದಲನೇ ಮತ್ತು ಎರಡನೇ ಯೋಜನೆ ತ್ರೈಮಾಸಿಕ ಅನುದಾನವಾಗಿ ಬಿಡುಗಡೆ ಮಾಡಲಾಗಿದೆ.

ಮೇಲೆ (2) ರಲ್ಲಿ ಓದಲಾದ ದಿನಾಂಕ: 01-10-2013 ರ ಪತ್ರದಲ್ಲಿ 2013-14ನೇ ಸಾಲಿನ ಆಯವ್ಯಯದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೆ ಅನುದಾನವಾಗಿ 20 ಫಾರಂಗಳಲ್ಲಿ ಸಂಶೋಧನಾ ಸಾಮರ್ಥ್ಯದ ಬಲವರ್ಧನೆಗೆ ಲೆಕ್ಕ ಶೀರ್ಷಿಕೆ 2415-80-004-1-01-101ರಡಿ ರೂ.1425.00 ಲಕ್ಷಗಳನ್ನು ಹಾಗೂ ಕೃಷಿ ಶಿಕ್ಷಣ ಅಡಿಯಲ್ಲಿ ಕಾಲೇಜಿನ ಪ್ರಯೋಗ ಶಾಲೆ, ಗ್ರಂಥಾಲಯ ಹಾಗೂ ಇತರೆ ಬೋಧನೆಗೆ ಸಂಬಂಧಪಟ್ಟ ಚಟುವಟಿಕೆಗಳ ಸುಧಾರಣೆಗೆ ಲೆಕ್ಕ ಶೀರ್ಷಿಕೆ 2415-80-277-1-01-101 ರಡಿ ರೂ.1475.00 ಲಕ್ಷಗಳನ್ನು ನಿಗಧಿಗೊಳಿಸಲಾಗಿದ್ದು, ಇದರಲ್ಲಿ ಮೊದಲನೆ ಮತ್ತು ಎರಡನೇ ತ್ರೈಮಾಸಿಕ ಯೋಜನೆ ಅನುದಾನವಾಗಿ ಸಂಶೋಧನಾ ಸಾಮರ್ಥ್ಯದ ಬಲವರ್ಧನೆಗೆ ಹಾಗೂ ಕೃಷಿ ಶಿಕ್ಷಣಕ್ಕೆ ಒಟ್ಟು ರೂ.725.00ಲಕ್ಷಗಳು +ರೂ. 725 ಲಕ್ಷಗಳು =ರೂ.1450.00 ಲಕ್ಷಗಳು (ಒಂದು ಸಾವಿರದ ನಾಲ್ಕು ನೂರಾ ಐವತ್ತು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆ ಮಾಡಲಾಗಿದೆ. ಮುಂದುವರೆದು ಮೂರನೇ ತ್ರೈಮಾಸಿಕ ಯೋಜನೆ ಅನುದಾನವಾಗಿ ಸಂಶೋಧನಾ ಸಾಮರ್ಥ್ಯದ ಬಲವರ್ಧನೆಗೆ ರೂ.356.25ಲಕ್ಷಗಳು ಹಾಗೂ ಕೃಷಿ ಶಿಕ್ಷಣಕ್ಕೆ ರೂ.368.75ಲಕ್ಷಗಳು ಒಟ್ಟು ರೂ.725.00ಲಕ್ಷ (ಏಳು ನೂರಾ ಇಪ್ಪತ್ತೈದು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆ ಮಾಡುವಂತೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೃತೋಇ 24 ಕೃವಿಬೆ 2013, ಬೆಂಗಳೂರು ದಿನಾಂಕ: 19-11-2013**

2013-14 ನೇ ಸಾಲಿಗೆ ಕೃಷಿ ವಿಶ್ವವಿದ್ಯಾಲಯ ಬೆಂಗಳೂರಿಗೆ ಕೃಷಿ ಸಂಶೋಧನೆಗೆ ಲೆಕ್ಕ ಶೀರ್ಷಿಕೆ 2415-80-004-1-01-101 ರಡಿ ಒದಗಿಸಲಾಗಿರುವ ರೂ. 1425.00 ಲಕ್ಷಗಳ ಪೈಕಿ ರೂ. 356.25 ಲಕ್ಷಗಳನ್ನು (ಮೂರು ನೂರಾ ಐವತ್ತಾರು ಲಕ್ಷದ ಇಪ್ಪತ್ತೈದು ಸಾವಿರಗಳು ಮಾತ್ರ) ಹಾಗೂ ಕೃಷಿ ಶಿಕ್ಷಣಕ್ಕೆ ಲೆಕ್ಕ ಶೀರ್ಷಿಕೆ 2415-80-277-1-01-101 ರಡಿ ಒದಗಿಸಲಾಗಿರುವ ರೂ.1475.00 ಲಕ್ಷಗಳ ಪೈಕಿ ರೂ. 368.75 ಲಕ್ಷಗಳನ್ನು (ಮೂರ ನೂರಾ ಅರವತ್ತೆಂಟು ಲಕ್ಷದ ಎಪ್ಪತ್ತೈದು ಸಾವಿರಗಳು ಮಾತ್ರ) ಒಟ್ಟು ರೂ.725.00ಲಕ್ಷ ಗಳನ್ನು (ಏಳು

...2

ನೂರಾ ಇಪ್ಪತ್ತೈದು ಲಕ್ಷಗಳು ಮಾತ್ರ) ಮೂರನೇ ತ್ರೈಮಾಸಿಕ ಯೋಜನೆ ಅನುದಾನವಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
- ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
- ಕೃಷಿ ಸಂಶೋಧನೆ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾದ ಅನುದಾನದ ಪೈಕಿ ಶೇಕಡಾ 50ರಷ್ಟನ್ನು ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗೆ ವಿನಿಯೋಗಿಸತಕ್ಕದ್ದು;
- ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
- ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು;

2) ಬಿಡುಗಡೆಯಾಗಿರುವ ಅನುದಾನಕ್ಕೆ ಕೃಷಿ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳು ಸಲ್ಲಿಸಿರುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಸರ್ಕಾರದ ಅಧಿನ ಕಾರ್ಯದರ್ಶಿ (ಸೇವೆಗಳು), ಕೃಷಿ ಇಲಾಖೆ ಇವರಿಗೆ ನೀಡಲಾಗಿದೆ.

3) ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್ ಡಿ 1 ಟಿಎಫ್‌ಪಿ 2013, ದಿನಾಂಕ : 10-5-2013 ಹಾಗೂ 16-11-2013ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ್ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 15 ಪ್ರತಿ ಒದಗಿಸಲು.

**ಪ್ರತಿಗಳು:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಕುಲಪತಿಗಳು/ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
3. ರಾಜ್ಯ ಹುಜೂರು ಖಜಾನಾಧಿಕಾರಿಗಳು, ಬೆಂಗಳೂರು.
4. ಸರ್ಕಾರಿ ಲೆಕ್ಕ ಪರಿಶೋಧಕರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
5. ಉಪನಿರ್ದೇಶಕರು, ನೆಟ್ವರ್ಕ್ ಮ್ಯಾನೇಜ್ ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-2 ಮತ್ತು 4) ವಿಧಾನಸೌಧ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
8. ಶಾಖಾ ರಕ್ಷಾಕಡತ/ ಹೆಚ್ಚುವರಿ ಪ್ರತಿಗಳು.